**All India Radio: Bangalore**
**Regional Bulletin In Kannada**
**30.07.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.07.2025 / 6.40 p.m.**
**<><><><>**

ಮುಖ್ಯಾಂಶಗಳು

- ರಾಜ್ಯದಲ್ಲಿ ಉದ್ದೇಶಿತ ಬಾಹ್ಯಾಕಾಶ ಪಾರ್ಕ್, ವಿದ್ಯುನ್ಮಾನ ಬಿಡಿಭಾಗಗಳ ತಯಾರಿಕೆಗೆ ರಿಯಾಯಿತಿ ನೀಡಲು ಸರ್ಕಾರ ತೀರ್ಮಾನ
- ಹುಬ್ಬಳ್ಳಿ ರೈಲ್ವೆ ನಿಲ್ದಾಣವನ್ನು ಅಂತಾರಾಷ್ಟ್ರೀಯ ರೈಲ್ವೆ ನಿಲ್ದಾಣವನ್ನಾಗಿ ಪರಿವರ್ತಿಸುವಂತೆ ಸಚಿವರಾದ ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ ಕೇಂದ್ರಕ್ಕೆ ಮನವಿ
- ಧರ್ಮಸ್ಥಳ ಪ್ರಕರಣ - ಎಸ್ಐಟಿ ಮುಖ್ಯಸ್ಥ ಪ್ರಣಬ್ ಮೊಹಂತಿ ಕೇಂದ್ರ ಸೇವೆಗೆ ಆಯ್ಕೆ
- ಬೆಂಗಳೂರು ಮೆಟ್ರೊ ದರ ಶೇಕಡ ೧೩೦ರಷ್ಟು ಹೆಚ್ಚಳ; ಲೋಕಸಭೆಯಲ್ಲಿ ಸಂಸದ ತೇಜಸ್ವಿ ಸೂರ್ಯ ಪ್ರಸ್ತಾಪ
- ಬೆಂಗಳೂರಿನಲ್ಲಿ ಬುಡಕಟ್ಟು ಸಂಸ್ಕೃತಿ ಪರಂಪರೆ ಕುರಿತ ರಾಷ್ಟ್ರೀಯ ಸಮ್ಮೇಳನ; ರಾಜ್ಯಪಾಲರು ಭಾಗಿ

<><><><>

ಉದ್ದೇಶಿತ ಬಾಹ್ಯಾಕಾಶ ಪಾರ್ಕ್, ವಿದ್ಯುನ್ಮಾನ ಬಿಡಿಭಾಗಗಳ ತಯಾರಿಕೆ ಪಾರ್ಕ್ ಮುಂತಾದ ಯೋಜನೆಗಳು ಸೇರಿದಂತೆ ಹಲವು ಮಹತ್ತ್ವದ ಉದ್ಯಮಗಳಿಗೆ ಸರಕಾರ ಕೊಡುವ ರಿಯಾಯಿತಿಗಳ ಕುರಿತ ನೀತಿಯನ್ನು ರೂಪಿಸಲಾಗುತ್ತಿದೆ. ಈ ಕುರಿತಂತೆ ಮುಖ್ಯಮಂತ್ರಿ ಭೇಟಿ ಮಾಡಿ ವಿಸ್ತೃತವಾಗಿ ಚರ್ಚಿಸಲು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಹಾಗೂ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತೀರ್ಮಾನಿಸಿದ್ದಾರೆ. ಎರಡೂ ಇಲಾಖೆಗಳು ಜತೆಗೂಡಿ ಜಾರಿಗೊಳಿಸಬೇಕಾದ ಹಲವು ಯೋಜನೆಗಳು ಮತ್ತು ರೂಪಿಸಬೇಕಾದ ಉಪಕ್ರಮಗಳ ಕುರಿತು ಉಭಯ ಸಚಿವರು ಇಂದು ಖನಿಜ ಭವನದಲ್ಲಿ ಮಹತ್ತ್ವದ ಸಭೆ ನಡೆಸಿದರು. ಸದ್ಯಕ್ಕೆ ರಾಜ್ಯದಲ್ಲಿ ತಯಾರಾಗುತ್ತಿರುವ ಸ್ಮಾರ್ಟ್‌ಫೋನ್‌ಗಳಲ್ಲಿ ಶೇಕಡ ೭೭ರಷ್ಟು ಅಮೆರಿಕಕ್ಕೆ ರಫ್ತಾಗುತ್ತಿದ್ದು ಸ್ಮಾರ್ಟ್‌ಫೋನ್ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಬೇಕಾಗಿದೆ. ಇದಕ್ಕೆ ಪೂರಕವಾಗಿ ಈ ಕ್ಷೇತ್ರಕ್ಕೆ ಹಲವು ರಿಯಾಯಿತಿಗಳನ್ನು ಘೋಷಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

<><><><>

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹಾಗೂ ರೈಲ್ವೆ ರಾಜ್ಯಸಚಿವ ವಿ.ಸೋಮಣ್ಣ ಅವರು, ನವದೆಹಲಿಯಲ್ಲಿಂದು ಕೇಂದ್ರ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್ ಅವರನ್ನು ಭೇಟಿಯಾಗಿ ಹುಬ್ಬಳ್ಳಿ ರೈಲ್ವೆ ನಿಲ್ದಾಣವನ್ನು ಅಂತಾರಾಷ್ಟ್ರೀಯ ಮಟ್ಟದ ರೈಲ್ವೆ ನಿಲ್ದಾಣವನ್ನಾಗಿ ಪರಿವರ್ತಿಸುವಂತೆ ಮನವಿ ಮಾಡಿದ್ದಾರೆ. ಗದಗ ರಸ್ತೆಯ ಮೇಲಿರುವ ಎರಡು ಲೇನ್ ರೈಲ್ವೆ ಸೇತುವೆಯನ್ನು ನಾಲ್ಕು ಲೇನ್‌ಗೆ ವಿಸ್ತರಿಸುವ ದೃಷ್ಟಿಯಿಂದ ಇನ್ನೊಂದು ರೈಲ್ವೆ ಸೇತುವೆ ನಿರ್ಮಾಣ ಕುರಿತು ಮನವಿ ಮಾಡಿದ್ದಾರೆ. ಸ್ಥಳೀಯ ಪಟ್ಟಣ ಹಾಗೂ ಗ್ರಾಮಗಳಿಂದ ಹುಬ್ಬಳ್ಳಿಗೆ ಪ್ರಯಾಣಿಸುವವರಿಗೆ ೧೦ ಹೊಸ ಮೆಮು ರೈಲು ಆರಂಭಿಸುವಂತೆ ಮನವಿ ಮಾಡಿದ್ದಾರೆ.

<><><><>

ಧರ್ಮಸ್ಥಳ ಪ್ರಕರಣ ಕುರಿತಂತೆ ವಿಶೇಷ ತನಿಖಾ ತಂಡ ತನಿಖೆ ತೀವ್ರಗೊಳಿಸಿದ್ದು ಸಾಕ್ಷಿ ದೂರುದಾರ ತೋರಿಸಿರುವ ಎರಡು ಜಾಗಗಳನ್ನು ಅಗೆಯಲಾಗಿದ್ದು ಶೋಧಕಾರ್ಯ ಮುಂದುವರೆದಿದೆ. ಈ ನಡುವೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆಗಾಗಿ ರಚಿಸಲಾಗಿರುವ ಎಸ್‌ಐಟಿ ಮುಖ್ಯಸ್ಥ ಐಪಿಎಸ್ ಅಧಿಕಾರಿ ಪ್ರಣಬ್ ಮೊಹಾಂತಿ ಕೇಂದ್ರ ಸೇವೆಗೆ ಆಯ್ಕೆ ಆಗಿದ್ದಾರೆ. ಈ ಕುರಿತಂತೆ ಪ್ರತಿಕ್ರಿಯಿಸಿರುವ ಗೃಹಸಚಿವ ಪರಮೇಶ್ವರ್ ವಿಶೇಷ ತನಿಖಾ ತಂಡದ ಮುಖ್ಯಸ್ಥರನ್ನು ಬದಲಾಯಿಸುವ ಕುರಿತು ರಾಜ್ಯ ಸರ್ಕಾರ ನಿರ್ಧಾರ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪ್ರಣಬ್ ಮೊಹಾಂತಿ ಕೇಂದ್ರ ಸೇವೆಗೆ ನಿಯೋಜನೆಗೊಂಡರೂ ಎಸ್‌ಐಟಿ ತನಿಖೆಯನ್ನು ಮುಂದುವರೆಸಬಹುದೇ ಎಂಬುದರ ಬಗ್ಗೆಯೂ ಪರಿಶೀಲಿಸಲಾಗುತ್ತಿದೆ ಎಂದು ಹೇಳಿದ್ದಾರೆ.

<><><><>

ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತವು ಪ್ರಯಾಣದ ವೆಚ್ಚವನ್ನು ಶೇಕಡಾ ೧೩೦ರಷ್ಟು ಹೆಚ್ಚಿಸಿದೆ. ಇದರಿಂದ ಜನಸಾಮಾನ್ಯರಿಗೆ ಹೊರೆಯಾಗಿದೆ ಎಂದು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಲೋಕಸಭೆಯಲ್ಲಿಂದು ತಿಳಿಸಿದ್ದಾರೆ. ಸಾರ್ವಜನಿಕ ಸಾರಿಗೆ, ಸಾರ್ವಜನಿಕರ ಅನುಕೂಲಕ್ಕಾಗಿ ಇರಬೇಕು, ಆದರೆ ಪ್ರಯಾಣ ದರವನ್ನು ಹೆಚ್ಚು ಮಾಡುವ ಮೂಲಕ ನಿಗಮವು ಜನರಿಗೆ ತೊಂದರೆ ಉಂಟು ಮಾಡುತ್ತಿದೆ. ಪ್ರಯಾಣ ದರದ ಕುರಿತಾಗಿ ಶುಲ್ಕ ಸಮಿತಿ, ವರದಿಯನ್ನು ಬಿಡುಗಡೆ ಮಾಡಲು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತಕ್ಕೆ ಸೂಚಿಸುವಂತೆ ಮನವಿ ಮಾಡಿದ್ದಾರೆ. ಇದೇ ವೇಳೆ, ಮೆಟ್ರೊ ಹಳದಿ ಮಾರ್ಗದ ಆರಂಭದಲ್ಲಿ ವಿಳಂಬವಾಗುತ್ತಿದ್ದು, ಅದನ್ನು ಕೂಡಲೇ ಆರಂಭಿಸಿ ಸುಮಾರು ೮೦ ಲಕ್ಷ ಪ್ರಯಾಣಿಕರಿಗೆ ಅನುವು ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ. ಮೆಟ್ರೊ ಕೆಂಪು ಮಾರ್ಗದ ಕಾಮಗಾರಿಯನ್ನು

ಶೀಘ್ರದಲ್ಲಿ ಆರಂಭಿಸಲು ಸಾರಿಗೆ ಸಚಿವಾಲಯಕ್ಕೆ ಸೂಚಿಸುವಂತೆ ಕೋರಿದ್ದಾರೆ. ಇದೇ ವೇಳೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮೈಸೂರಿನಲ್ಲಿ ಮಾದಕ ವಸ್ತು ಜಾಲ ಹೆಚ್ಚುತ್ತಿರುವ ಕುರಿತು ಸರ್ಕಾರದ ಗಮನಕ್ಕೆ ತಂದರು. ಈ ವೇಳೆ ಅವರು ಸಾಂಸ್ಕೃತಿಕ ನಗರಿ ಎಂದು ಕರೆಸಿಕೊಳ್ಳುತ್ತಿರುವ ಮೈಸೂರು , ಮಾದಕ ದ್ರವ್ಯದ ಬೀಡಾಗಿದೆ. ೩೮೧ ಕೋಟಿ ರೂಪಾಯಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದರೂ ಕರ್ನಾಟಕ ಪೊಲೀಸರು ಇದುವರೆಗೆ ಯಾವುದೇ ಕ್ರಮ ತೆಗೆದುಕೊಂಡಿಲ್ಲ ಎಂದು ಆರೋಪಿಸಿದ್ದಾರೆ. ಕೇಂದ್ರ ಗೃಹ ಸಚಿವಾಲಯವು ತನಿಖೆ ನಡೆಸಲು ಆದೇಶಿಸುವಂತೆ ಮನವಿ ಮಾಡಿದ್ದಾರೆ.

<><><><>

'ಬುಡಕಟ್ಟು ಸಾಂಸ್ಕೃತಿಕ ಪರಂಪರೆಯನ್ನು ಕೇವಲ ವಸ್ತು ಸಂಗ್ರಹಾಲಯಗಳಿಗೆ ಸೀಮಿತಗೊಳಿಸುವ ಬದಲು ಶಿಕ್ಷಣ, ನೀತಿ ನಿರೂಪಣೆ ಮತ್ತು ಸಾಮಾಜಿಕ ಅಭಿವೃದ್ಧಿಯ ಕೇಂದ್ರಕ್ಕೆ ತರುವುದು ಅವಶ್ಯಕ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ "ಬುಡಕಟ್ಟು ಸಂಸ್ಕೃತಿ, ಪರಂಪರೆ ಮತ್ತು ಸ್ಥಳೀಯ ಆಚರಣೆಗಳು" ಕುರಿತು ಆಯೋಜಿಸಿದ್ದ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದ ಅವರು. "ಭಾರತದಲ್ಲಿ ೭೦೦ಕ್ಕೂ ಹೆಚ್ಚು ಗುರುತಿಸಲ್ಪಟ್ಟ ಬುಡಕಟ್ಟು ಜನಾಂಗಗಳಿವೆ. ಈ ಸಮುದಾಯಗಳ ಸಂಸ್ಕೃತಿ, ಭಾಷೆಗಳು, ಹಾಡುಗಳು, ನೃತ್ಯಗಳು, ಜಾನಪದ ಕಥೆಗಳು, ಸಾಮಾಜಿಕ ವ್ಯವಸ್ಥೆಗಳು ಮತ್ತು ಜೀವನಶೈಲಿಗಳು ವೈವಿಧ್ಯಮಯ ಭಾರತದ ಸೌಂದರ್ಯವನ್ನು ಪ್ರತಿಬಿಂಬಿಸುತ್ತವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ಮೆಟ್ರೋ ನಿಲ್ದಾಣಗಳಲ್ಲಿ ನಂದಿನಿ ಕೇಂದ್ರ ತೆರೆಯುವ ಕುರಿತಂತೆ ಸ್ಥಳ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ತಿಳಿಸಿದ್ದಾರೆ. ಚನ್ನಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,. ಈ ಕುರಿತಂತೆ ಬಿಎಂಆರ್‌ಸಿಎಲ್ ಜೊತೆ ಒಪ್ಪಂದ ಮಾಡಿಕೊಳ್ಳಲಾಗುವುದು ಎಂದು ಹೇಳಿದ್ದಾರೆ. ಬೆಂಗಳೂರಿನ ಒಂದು ಭಾಗದಲ್ಲಿ ಪ್ರಾಯೋಗಿಕವಾಗಿ ಪರಿಸರ ಸ್ನೇಹಿ ಹಾಲಿನ ಪ್ಯಾಕೇಟ್ ಪರಿಚಯಿಸಲಾಗುವುದು ಎಂದು ಸ್ಪಷ್ಟ ಪಡಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯ ವೇಮಗಲ್ ಮತ್ತು ಕುರಗಲ್ ಪಟ್ಟಣ ಪಂಚಾಯತಿಯ ಚುನಾವಣೆಯ ದಿನಾಂಕ ನಿಗದಿಯಾಗಿದ್ದು, ಚುನಾವಣೆ ಪ್ರದೇಶದಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ.

ಮತದಾರರು ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ಕಡ್ಡಾಯವಾಗಿ ಮತದಾನ ಮಾಡುವಂತೆ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೂಚಿಸಿದ್ದಾರೆ. ವೇಮಗಲ್ - ಕುರಗಲ್ ಪಟ್ಟಣ ಪಂಚಾಯತಿ ಚುನಾವಣೆ ಅಧಿಸೂಚನೆ ಹೊರಡಿಸಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಮಪತ್ರ ಸಲ್ಲಿಸಲು ಆಗಸ್ಟ್ ೫ ಕೊನೆಯ ದಿನವಾಗಿರುತ್ತದೆ. ಮತ ಎಣಿಕೆಯನ್ನು ಆಗಸ್ಟ್ ೨೦ ರಂದು ತಾಲ್ಲೂಕು ಕೇಂದ್ರದಲ್ಲಿ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

<><><>

ಕೊಡಗು ಜಿಲ್ಲೆಯಲ್ಲಿ ಕಳೆದ ಐದಾರು ದಿನಗಳಿಂದ ಸುರಿದ ಭಾರಿ ಗಾಳಿ ಮಳೆಯಿಂದಾಗಿ ಸುಮಾರು ೮೦೦ ರಷ್ಟು ವಿದ್ಯುತ್ ಕಂಬಗಳು, ಮರಗಳು ಹಾಗೂ ಮರದ ರೆಂಬೆಕೊಂಬೆಗಳು ಮುರಿದು ಬಿದ್ದು ಹಾನಿಯಾಗಿದೆ. ಅಪಾರ ಪ್ರಮಾಣದಲ್ಲಿ ವಿದ್ಯುತ್ ಮಾರ್ಗಗಳಿಗೆ ಹಾನಿ ಉಂಟಾಗಿ ಬಹುತೇಕ ಎಲ್ಲಾ ಕಡೆ ವಿದ್ಯುತ್ ವ್ಯತ್ಯಯ ಉಂಟಾಗಿದೆ. ಕೊಡಗು ಜಿಲ್ಲೆಯ ಅನೇಕ ಗ್ರಾಮಗಳಿಗೆ ಇನ್ನೂ ವಿದ್ಯುತ್ ಸಂಪರ್ಕ ದೊರಕಿಲ್ಲ. ಆದಷ್ಟು ಶೀಘ್ರ ವಿದ್ಯುತ್ ಮರು ಜೋಡಣೆ ಮಾಡಲು ಪ್ರಯತ್ನಿಸಲಾಗುವುದು ಎಂದು ಸೆಸ್ಕ್ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><>

ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಣೆಕಟ್ಟೆಯಿಂದ ಕಾವೇರಿ ನದಿಗೆ ಹೆಚ್ಚಿನ ಮಟ್ಟದ ನೀರನ್ನು ಹರಿಬಿಡುತ್ತಿರುವ ಹಿನ್ನಲೆಯಲ್ಲಿ ಮಳವಳ್ಳಿ ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ತಾಣ ಮುತ್ತತ್ತಿಗೆ ಪ್ರವಾಸಿಗರಿಗೆ ನಿರ್ಬಂದ ಹೇರಿ ತಹಸೀಲ್ದಾರ್ ಲೋಕೇಶ್ ಆದೇಶಿಸಿದ್ದಾರೆ. ಮುತ್ತತ್ತಿ ಪುರಾಣ ಪ್ರಸಿದ್ಧ ಪ್ರವಾಸಿ ತಾಣವಾಗಿದ್ದು ಕಾವೇರಿ ನದಿ ವೀಕ್ಷಿಸಲು ನಿತ್ಯ ಸಾವಿರಾರು ಜನ ಆಗಮಿಸುತ್ತಾರೆ. ಈ ಹಿಂದೆ ಕಾವೇರಿ ನದಿಗೆ ಇಳಿದು ಹಲವು ಮಂದಿ ಪ್ರವಾಸಿಗರು ಮೃತಪಟ್ಟಿರುವ ಹಿನ್ನೆಲೆಯಲ್ಲಿ ಈ ಆದೇಶ ನೀಡಿದ್ದಾರೆ. ಜೊತೆಗೆ ಕೃಷ್ಣರಾಜ ಸಾಗರ ಅಣೆಕಟ್ಟೆಯಿಂದ ೮೫ ಕ್ಯೂಸೆಕ್ ಸಾವಿರಕ್ಕೂ ಅಧಿಕ ಪ್ರಮಾಣದ ನೀರು ಬಿಟ್ಟಿರುವುದರಿಂದ ಕಾವೇರಿ ನದಿ ಮೈದುಂಬಿ ಹರಿಯುತ್ತಿದೆ.

<><><>

ಕಾರವಾರ ಕಾಳಿನದಿ ಯೋಜನೆಯ ಒಂದನೇ ಹಂತದ ಸೂಪಾ ಆಣೆಕಟ್ಟಿನ ನೀರಿನ ಮಟ್ಟ ಸತತ ಏರಿಕೆಯಾಗುತ್ತಿದೆ. ಸುರಕ್ಷತೆಯ ದೃಷ್ಠಿಯಿಂದ ಜಲಾಶಯದ ಹೆಚ್ಚುವರಿ ನೀರನ್ನು ಯಾವುದೇ ಸಮಯದಲ್ಲಿ ಹೊರಬಿಡಲಾಗುವುದು ಎಂದು ಕೆಪಿಸಿ ಅಧಿಕಾರಿಗಳು ಸಾರ್ವಜನಿಕರಿಗೆ ಎಚ್ಚರಿಕೆಯನ್ನು ನೀಡಿದ್ದಾರೆ. ಆಣೆಕಟ್ಟೆಯ ಕೆಳದಂಡೆಯಲ್ಲಿ ಹಾಗೂ ನದಿ ಪಾತ್ರದುದ್ದಕ್ಕೂ ವಾಸಿಸುತ್ತಿರುವ ಸಾರ್ವಜನಿಕರು ತಮ್ಮ ಜನ, ಜಾನುವಾರು ಇತ್ಯಾದಿಗಳೊಂದಿಗೆ ಸುರಕ್ಷಿತ

ಪ್ರದೇಶಕ್ಕೆ ತೆರಳಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು, ಸೂಪಾ ಕನಾಟಕ ವಿದ್ಯುತ್ ನಿಗಮ ನಿಯಮಿತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>